## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣ ರಸ್ತೆ ಪರಿಮಿತಿಯಲ್ಲಿ ಬರುವ ರಾಜ್ಯ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ 2017-18ನೇ ಸಾಲಿನಲ್ಲಿ ರಸ್ತೆ ಸುರಕ್ಷತಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನ ಹಂಚಿಕೆ ಮಾಡಿ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

1. ದಿನಾಂಕ:17-8-2016 ರಂದು ಜರುಗಿದ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ:ಸಿ 401/2016.
2. ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂ:ಆಇ/233/ವೆಚ್ಚ-6/2017 ದಿನಾಂಕ:26-4-2017
3. ಮುಖ್ಯ ಇಂಜಿನಿಯರ್, ಪಂರಾಇಂ ಇಲಾಖೆ ರವರ ಪತ್ರ ಸಂ:ಮುಇಂ/ಪಂರಾಇಂಇ/ತಾಂಸ-4/ಸ ಇಂ-62017-18 ದಿ:18-4-2017.

**ಪ್ರಸ್ತಾವನೆ:**

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಹಿನ್ನೆಲೆಯಲ್ಲಿ ರಸ್ತೆ ಸುರಕ್ಷತೆ ಒದಗಿಸುವ ನಿಟ್ಟಿನಲ್ಲಿ ಗ್ರಾಮ ಪರಿಮಿತಿಯಲ್ಲಿ ಬರುವ ರಾಜ್ಯ / ರಾಷ್ಟ್ರ ಹೆದ್ದಾರಿಗಳಲ್ಲಿ ರಸ್ತೆ ಸುರಕ್ಷಾ ಕ್ರಮ ಕೈಗೊಳ್ಳಲಾಗುವುದು ಎಂದು 2016-17ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿರುತ್ತದೆ.

ಅದರಂತೆ ರಸ್ತೆ ಸುರಕ್ಷತಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಪ್ರತಿ ವರ್ಷಕ್ಕೆ ಅಂದಾಜು ಮೊತ್ತ ರೂ.50.00 ಕೋಟಿಯಂತೆ ಒಟ್ಟು 4 ವರ್ಷಗಳಿಗೆ ಒಟ್ಟಾರೆ ರೂ.200.00 ಕೋಟಿಗಳಿಗೆ (2016-17 ರಿಂದ 2019-2020ರವರೆಗೆ) ಪ್ರಾಸ್ತಾವಿಕ ಯೋಜನೆಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರು ಸಿದ್ಧಪಡಿಸಿರುತ್ತಾರೆ. ಪ್ರಸ್ತುತ 2017-18ನೇ ಸಾಲಿನಲ್ಲಿ ಈ ಕಾರ್ಯಕ್ರಮದಡಿ ರೂ.50.00 ಕೋಟಿ ಮೊತ್ತಕ್ಕೆ ರಸ್ತೆ ಸುರಕ್ಷತಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮೇಲೆ ಓದಲಾದ-3ರ ಪತ್ರದಲ್ಲಿ ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ ರವರು ಕೋರಿರುವಂತೆ ಪ್ರಸ್ತುತ ಜಾರಿಯಲ್ಲಿರುವ ಕೆ.ಟಿ.ಪಿ.ಪಿ. ನಿಯಮಗಳನ್ವಯ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದನೆ ನೀಡಿದೆ. ಸದರಿ ಕಾಮಗಾರಿಗಳ ಬಿಲ್ ಪಾವತಿಗಾಗಿ ರೂ.50.00 ಕೋಟಿಗಳಲ್ಲಿ ಅನುಷ್ಠಾನಗೊಳಿಸುವ ಸಲುವಾಗಿ ಅನುದಾನ ಹಂಚಿಕೆ ಮಾಡಿ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:112:ಆರ್‌ಆರ್‌ಸಿ:2017, ಬೆಂಗಳೂರು, ದಿನಾಂಕ11-5-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಗ್ರಾಮೀಣ ರಸ್ತೆ ಪರಿಮಿತಿಯಲ್ಲಿ ಬರುವ ರಾಜ್ಯ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ 2017-18ನೇ ಸಾಲಿನಲ್ಲಿ ರಸ್ತೆ ಸುರಕ್ಷತಾ ಕಾಮಗಾರಿಗಳ ಬಾಕಿ ಬಿಲ್ ಪಾವತಿಸಲು ಲೆಕ್ಕ ಶೀರ್ಷಿಕೆ 3054-04-337-1-12-059 ರಡಿ ರೂ.50.00 ಕೋಟಿಗಳಲ್ಲಿ (ರೂಪಾಯಿ ಐವತ್ತು ಕೋಟಿಗಳು ಮಾತ್ರ) ನಿಯಮಾನುಸಾರ ಅನುಷ್ಠಾನಗೊಳಿಸಲು ಅನುಬಂಧದಲ್ಲಿರುವಂತೆ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುದಾನ ಹಂಚಿಕೆ ಮಾಡಿ ಅನುದಾನ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು**

1. ಈ ಅನುದಾನವನ್ನು ಜಿಲ್ಲಾ ಪಂಚಾಯತಿಗಳ ಅಧೀನದಲ್ಲಿರುವ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮೂಲಕ ಅನುಷ್ಠಾನಗೊಳಿಸಿದ ಕಾಮಗಾರಿಗಳ ಬಿಲ್ ಪಾವತಿಗೆ ಮಾತ್ರ ವಿನಿಯೋಗಿಸತಕ್ಕದ್ದು.

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಈ ಯೋಜನೆಯ ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಮತ್ತು ಸರ್ಕಾರಕ್ಕೆ ಕಾಲಕಾಲಕ್ಕೆ ಪ್ರಗತಿಯ ವರದಿಯನ್ನು ನೀಡತಕ್ಕದ್ದು.

3. ಬಳಕೆಯಾದ ಹಣ ಹಾಗೂ ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಒದಗಿಸತಕ್ಕದ್ದು.

4. ಈ ಯೋಜನೆಯ ಎಲ್ಲಾ ಕಾಮಗಾರಿಗಳನ್ನು ಕೆಟಿಟಿಪಿ ನಿಯಮಾನುಸಾರ ಕೈಗೊಳ್ಳುವುದು. ಒಂದು ವೇಳೆ ರಸ್ತೆ ಸುರಕ್ಷಿತಾ ಕಾಮಗಾರಿಗಳನ್ನು ತುಂಡುಗುತ್ತಿಗೆ ಮೇಲೆ ಕೈಗೊಂಡಿದ್ದಲ್ಲಿ ಸದರಿ ಕಾಮಗಾರಿಗಳನ್ನು ನೊಂದಾಯಿತ ಗುತ್ತಿಗೆದಾರರಿಗೆ ನಿಯಮಾನುಸಾರ ಕಾಮಗಾರಿ ವಹಿಸಿಕೊಟ್ಟಿರುವುದನ್ನು ಖಚಿತಪಡಿಸಿಕೊಳ್ಳುವುದು.

5. ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿದ ಬಳಿಕ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿ ಮಾಡುವುದು ಕಡ್ಡಾಯವಾಗಿರುತ್ತದೆ.

6. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

7. ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ, ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ ಪ್ರಸ್ತುತ ಈ ಆದೇಶದಲ್ಲಿನ ಕಾರ್ಯಕ್ರಮದ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.

8. ರಸ್ತೆ ಸುರಕ್ಷತೆ ಕಾಮಗಾರಿಗಳಿಂದ ಉಂಟಾಗಿರುವ ಪ್ರಯೋಜನದ ಕುರಿತು 3 ಹಂತದ ಛಾಯಾಚಿತ್ರ ಸಹಿತ ವರದಿಗಳನ್ನು ರಸ್ತೆ ಸುರಕ್ಷತಾ ಕೋಶದ ಮುಖೇನ ಮಾನ್ಯ ಸರ್ವೋಚ್ಛ ನ್ಯಾಯಾಲಯಕ್ಕೆ ಸಲ್ಲಿಸಬೇಕಾಗಿರುವ ಕಾರಣ, ವ್ಯವಸ್ಥಿತ ರೀತಿಯಲ್ಲಿ ದಾಖಲೀಕರಣ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂ:ಎಫ್‌ಡಿ/01:ಟಿಎಫ್‌ಪಿ/17 ದಿ:5-4-2017 ಹ ರಲ್ಲಿ ಪ್ರತ್ಯಾಯೋಜಿಸಿದಂತೆ ಹಾಗೂ ಟಿಪ್ಪಣಿ ಸಂಖ್ಯೆ:ಆಇ/233/ವೆಚ್ಚ-6/2017, ದಿನಾಂಕ:26-4-2017ರಲ್ಲಿ ತಿಳಿಸಿದ ಮೇರೆಗೆ ಹೊರಡಿಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲಕರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲಕರು (ಆಡಿಟ್-1), ಕರ್ನಾಟಕ, ಬೆಂಗಳೂರು.

3. ಮಹಾಲೇಖಪಾಲಕರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು , ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
16. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
17. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
18. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
19. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
20. ಎಲ್ಲಾ ಪಂಚಾಯತ್ ರಾಜ್ ಇಂಜನಿರಿಂಗ್ ವೃತ್ತಗಳ ಅಧೀಕ್ಷಕ ಇಂಜನಿಯರುಗಳಿಗೆ.
21. ಎಲ್ಲಾ ಪಿ.ಎಂ.ಜಿ.ಎಸ್.ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ
22. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
23. ಮಾಹಿತಿ ಕೇಂದ್ರಕ್ಕೆ-(10 ಪ್ರತಿಗಳು).
24. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

## ಅನುಬಂಧ

**ರಸ್ತೆ ಸುರಕ್ಷತಾ ಕಾರ್ಯಕ್ರಮಕ್ಕೆ ಅನುದಾನ ಹಂಚಿಕೆ ಮಾಡಿ ಬಿಡುಗಡೆ ಮಾಡಿದ ಅನುದಾನ ವಿವರ**
**(ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:112:ಆರ್‌ಆರ್‌ಸಿ:2017, ದಿನಾಂಕ:11-5-2017)**

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ಹಂಚಿಕೆ ಮಾಡಿದ ಅನುದಾನ | ಬಿಡುಗಡೆ ಮಾಡಿದ ಅನುದಾನ |
|---|---|---|---|
| 1 | ಬಾಗಲಕೋಟೆ | 168.00 | 168.00 |
| 2 | ಬೆಂಗಳೂರು (ಗ್ರಾ) | 81.00 | 81.00 |
| 3 | ಬೆಂಗಳೂರು (ನ) | 57.00 | 57.00 |
| 4 | ಬೆಳಗಾಂ | 318.00 | 318.00 |
| 5 | ಬಳ್ಳಾರಿ | 149.00 | 149.00 |
| 6 | ಬೀದರ್ | 100.00 | 100.00 |
| 7 | ಬಿಜಾಪುರ | 241.00 | 241.00 |
| 8 | ಚಾಮರಾಜನಗರ | 86.00 | 86.00 |
| 9 | ಚಿಕ್ಕಬಳ್ಳಾಪುರ | 101.00 | 101.00 |
| 10 | ಚಿಕ್ಕಮಗಳೂರು | 190.00 | 190.00 |
| 11 | ಚಿತ್ರದುರ್ಗ | 188.00 | 188.00 |
| 12 | ದಕ್ಷಿಣ ಕನ್ನಡ | 258.00 | 258.00 |
| 13 | ದಾವಣಗೆರೆ | 151.00 | 151.00 |
| 14 | ಧಾರವಾಡ | 106.00 | 106.00 |
| 15 | ಗದಗ | 122.00 | 122.00 |
| 16 | ಗುಲ್ಬರ್ಗಾ | 183.00 | 183.00 |
| 17 | ಹಾಸನ | 239.00 | 239.00 |
| 18 | ಹಾವೇರಿ | 103.00 | 103.00 |
| 19 | ಕೊಡಗು | 114.00 | 114.00 |
| 20 | ಕೋಲಾರ | 116.00 | 116.00 |
| 21 | ಕೊಪ್ಪಳ | 108.00 | 108.00 |
| 22 | ಮಂಡ್ಯ | 199.00 | 199.00 |
| 23 | ಮೈಸೂರು | 190.00 | 190.00 |
| 24 | ರಾಮನಗರ | 70.00 | 70.00 |
| 25 | ರಾಯಚೂರು | 132.00 | 132.00 |
| 26 | ಶಿವಮೊಗ್ಗ | 327.00 | 327.00 |
| 27 | ತುಮಕೂರು | 332.00 | 332.00 |
| 28 | ಉಡುಪಿ | 181.00 | 181.00 |
| 29 | ಉತ್ತರ ಕನ್ನಡ | 322.00 | 322.00 |
| 30 | ಯಾದಗಿರಿ | 68.00 | 68.00 |
| | **ಒಟ್ಟು** | **5000.00** | **5000.00** |

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.